## ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:16-03-2021.

## ಆದೇಶ

1. ಭಾರತ ಸರ್ಕಾರದ ಕೇಂದ್ರ ಗೃಹ ಮಂತ್ರಾಲಯವು ಆದೇಶ ಸಂಖ್ಯೆ:40-3/2020-ಡಿಎಂ-I(ಎ), ದಿನಾಂಕ:26.02.2021ರಲ್ಲಿ ದೇಶಾದ್ಯಂತ ಕೋವಿಡ್-19 ಸೋಂಕು ನಿಗಾವಣೆ, ನಿಯಂತ್ರಣ ಮತ್ತು ಜಾಗ್ರತೆಗೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಹೊರಡಿಸಿದೆ. ಅದರನ್ವಯ, ರಾಜ್ಯ ಸರ್ಕಾರವು ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:01.03.2021ರಲ್ಲಿ ಕೋವಿಡ್-19 ವೈರಾಣು ಸೋಂಕು ನಿಗಾವಣೆ, ನಿಯಂತ್ರಣ ಮತ್ತು ಜಾಗ್ರತೆಗೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ದಿನಾಂಕ:31.03.2021ರವರೆಗೆ ಜಾರಿಯಲ್ಲಿರುತ್ತದೆ.

2. ರಾಜ್ಯದಲ್ಲಿ ಕೋವಿಡ್ ಕಣ್ಗಾವಲು, ಮೇಲುಸ್ತುವಾರಿ ಮತ್ತು ನಿರ್ವಹಣೆಗಾಗಿ ಹಾಗೂ ಸಮನ್ವಯ ಕಾರ್ಯಕ್ಕಾಗಿ ವಿಪತ್ತು ನಿರ್ವಹಣೆ ಕಾಯ್ದೆ-2005ರ ಸೆಕ್ಷನ್ 24 (ಇ), (ಎಫ್) ಮತ್ತು (ಎಲ್) ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಈ ಕೆಳಕಂಡ ಅಧಿಕಾರಿಗಳನ್ನು ಅವರ ಹೆಸರಿನ ಮುಂದೆ ತಿಳಿಸಿರುವ ಕಾರ್ಯ ನಿರ್ವಹಣೆಯ ಜವಾಬ್ದಾರಿಯನ್ನು ನಿರ್ವಹಿಸಲು ನೇಮಿಸಿ ಆದೇಶಿಸಿದೆ:

| ಕ್ರ.ಸಂ. | ಅಧಿಕಾರಿಗಳ ಹೆಸರು | ಕಾರ್ಯ ನಿರ್ವಹಣಾ ಜವಬ್ದಾರಿ |
|---|---|---|
| 1 | ಶ್ರೀ ತುಷಾರ್ ಗಿರಿನಾಥ್, ಭಾ.ಆ.ಸೇ., ಸರ್ಕಾರದ ಪ್ರಧಾನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು. | ಆಪ್ತಮಿತ್ರ ಸಹಾಯವಾಣಿಯಲ್ಲಿನ ತಂತ್ರಾಂಶವನ್ನು (14410) NASCOM/ INFOSYS ಇವರಿಂದ ಪಡೆದು ರಾಜ್ಯ ದತ್ತಾಂಶ ಕೇಂದ್ರದಲ್ಲಿ ಅಳವಡಿಸಲು ನೋಡಲ್ ಅಧಿಕಾರಿಯಾಗಿ ನೇಮಿಸಿದೆ. |
| 2 | ಶ್ರೀಮತಿ ಮೀನಾಕ್ಷಿ ನೇಗಿ ಭಾ.ಅ.ಸೇ., ಹೆಚ್ಚುವರಿ ಪ್ರಧಾನ ಅರಣ್ಯ ಸಂರಕ್ಷಣಾಧಿಕಾರಿ (CAMPA), ಬೆಂಗಳೂರು. | ಆಪ್ತಮಿತ್ರ ಸಹಾಯವಾಣಿಯಲ್ಲಿನ ತಂತ್ರಾಂಶವನ್ನು (14410) NASCOM/ INFOSYS ಇವರಿಂದ ಪಡೆದು ರಾಜ್ಯ ದತ್ತಾಂಶ ಕೇಂದ್ರದಲ್ಲಿ ಅಳವಡಿಸಲು ತಂಡದ ಸದಸ್ಯರಾಗಿ ನೋಡಲ್ ಅಧಿಕಾರಿಗೆ ಸಹಕರಿಸಲು ನೇಮಿಸಿದೆ. |
| 3 | ಶ್ರೀಮತಿ ಸಿ. ಶಿಖಾ, ಭಾ.ಆ.ಸೇ., ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಬೆಂಗಳೂರು. | ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕೋವಿಡ್-19 ವಿಷಯಕ್ಕೆ ಸಂಬಂಧಿಸಿದಂತೆ ಸಮನ್ವಯಕ್ಕಾಗಿ ರಾಜ್ಯ ನೋಡಲ್ ಅಧಿಕಾರಿಯಾಗಿ ನೇಮಿಸಿದೆ. |
| 4 | ಡಾ|| ಕೆ. ಹರೀಶ್ ಕುಮಾರ್, ಭಾ.ಆ.ಸೇ., ಆಯುಕ್ತರು, ಉದ್ಯೋಗ ಮತ್ತು ತರಬೇತಿ ಇಲಾಖೆ, ಬೆಂಗಳೂರು. | ಕೋವಿಡ್-19 ಕಣ್ಗಾವಲು, ಮೇಲುಸ್ತುವಾರಿ ಮತ್ತು ನಿರ್ವಹಣೆಯ ರಾಜ್ಯ ನೋಡಲ್ ಅಧಿಕಾರಿಯಾಗಿ ನೇಮಿಸಿದೆ. |

**(ಅಂಜುಂ ಪರ್ವೇಜ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ
ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ
ವಿಪತ್ತು ನಿರ್ವಹಣಾ ಪ್ರಾಧಿಕಾರದ
ಕಾರ್ಯಕಾರಿ ಸಮಿತಿ

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.